# ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 313 (428) |
| ಉತ್ತರಿಸುವ ದಿನಾಂಕ | 12-12-2018 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎನ್.ರವಿಕುಮಾರ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | ಕಂದಾಯ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ವರ್ತೂರು ಹೋಬಳಿಯ ಬೆಳ್ಳಂದೂರು ಖಾನೆ ಗ್ರಾಮದ ಸರ್ವೆ ಸಂಖ್ಯೆಗಳಾದ 110/1, 110/2, 110/3 ರಲ್ಲಿ ಪ್ರೆಸ್ಟೀಜ್ ಟೆಕ್ ಪಾರ್ಕ್ 3 ಎಂಬ ಹೆಸರಿನಲ್ಲಿ ನಿರ್ಮಿಸಿದ ವಾಣಿಜ್ಯ ಸಂಕೀರ್ಣದ ವಾಣಿಜ್ಯ ಬ್ಲಾಕುಗಳನ್ನು 135 ವಿವಿಧ ಗ್ರಾಹಕರುಗಳಿಗೆ ಸರ್ಕಾರವು ನಿಗದಿಪಡಿಸಿದ ಮಾರ್ಗಸೂಚಿ ದರಕ್ಕಿಂತ ಕಡಿಮೆ ದರದಲ್ಲಿ ಮಾರಾಟ ನೋಂದಣಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ | ಉಪ ನೋಂದಣಿ ಅಧಿಕಾರಿಯವರು (ಶಿವಾಜಿನಗರ) ಇವರು 2014-15 ಮತ್ತು 2015-16ನೇ ಸಾಲಿನಲ್ಲಿ ಮಾರ್ಗಸೂಚಿ ದರಕ್ಕಿಂತ ಕಡಿಮೆ ದರಕ್ಕೆ ಅಂದರೆ ಕನಿಷ್ಟ ಪಕ್ಷ ಚದರ ಅಡಿ ಒಂದಕ್ಕೆ ರೂ.5,900 ರಂತೆ ನೋಂದಣಿ ಮಾಡಬೇಕಾಗಿದ್ದು, ಚದರ ಅಡಿ ಒಂದಕ್ಕೆ ರೂ.3000 ದರದಲ್ಲಿ ನೋಂದಣಿ ಮಾಡಿರುವುದು ಸರಿಯೇ; | 2014-15ನೇ ಸಾಲಿನಲ್ಲಿ 23 ಪ್ರಕರಣ ಮತ್ತು 2015-16ನೇ ಸಾಲಿನಲ್ಲಿ 111 ಪ್ರಕರಣಗಳನ್ನು ಮಾರ್ಗಸೂಚಿದರಕ್ಕಿಂತ ಕಡಿಮೆ ದರಕ್ಕೆ ನೋಂದಣಿ ಮಾಡಿರುವುದು ಕಂಡು ಬಂದಿದ್ದು, ಇದು ನಿಯಮದ ಉಲ್ಲಂಘನೆಯಾಗಿದೆ. |
| ಇ | ಸರ್ಕಾರಕ್ಕೆ ರೂ.17.25 ಕೋಟಿಗಳ ಮುದ್ರಾಂಕ ಸುಂಕ ಮತ್ತು ನೋಂದಣಿ ಶುಲ್ಕದ ನಷ್ಟ ಉಂಟಾಗಿದ್ದು, ಈ ನಷ್ಟಕ್ಕೆ ಕಾರಣರಾದ ಅಧಿಕಾರಿಯ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; | ತಪ್ಪಿತಸ್ಥ ಅಧಿಕಾರಿಗಳಿಗೆ ನಿಯಮಾನುಸಾರ ನೋಟಿಸು ಜಾರಿ ಮಾಡಲಾಗಿದ್ದು, ಈ ಬಗ್ಗೆ ಪರಿಶೀಲಿಸಿ, ಸೂಕ್ತ ಶಿಸ್ತು ಕ್ರಮ ಕೈಗೊಳ್ಳಲಾಗುವುದು. |
| ಈ | ಸರ್ಕಾರಕ್ಕೆ ಉಂಟಾದ ರಾಜಸ್ವ ನಷ್ಟವನ್ನು ಸಂಬಂಧಿಸಿದ ಅಧಿಕಾರಿಯಿಂದ ವಸೂಲಿ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ; ಇಲ್ಲವಾದಲ್ಲಿ, ಯಾವಾಗ ಕ್ರಮ ಕೈಗೊಳ್ಳಲಾಗುವುದು; | ಸರ್ಕಾರಕ್ಕೆ ಉಂಟಾಗಿರುವ ನಷ್ಟವನ್ನು ಸಂಬಂಧಪಟ್ಟ ಅಧಿಕಾರಿ/ ಪಕ್ಷಕಾರರಿಂದ ವಸೂಲಾತಿ ಮಾಡಲು ಕ್ರಮ ಕೈಗೊಳ್ಳಲಾಗುವುದು. |
| ಉ | ಉಪ ನೋಂದಣಾಧಿಕಾರಿಗಳು ಉದ್ದೇಶ ಪೂರ್ವಕವಾಗಿ ವಾಸ್ತವಿಕ ಮಾರ್ಗದರ್ಶಿ ಮೊತ್ತಕ್ಕಿಂತ ಕಡಿಮೆ ದರಕ್ಕೆ ನೋಂದಣಿ ಮಾಡಿರುವುದರಿಂದ, ಆಗಿರುವ ನಷ್ಟಕ್ಕೆ ಕರ್ನಾಟಕ ಮುದ್ರಾಂಕ ನಿಯಮಗಳ ಪ್ರಕಾರ 5 ಪಟ್ಟು ದಂಡ ರೂ.86.25 ಕೋಟಿ ವಿಧಿಸಬಹುದಾಗಿರುವುದು ಸರಿಯೇ; | ಕರ್ನಾಟಕ ಮುದ್ರಾಂಕ ಕಾಯ್ದೆ, 1957ರ ಕಲಂ 61 ರನ್ವಯ ದಂಡ ವಿಧಿಸಬಹುದಾಗಿದೆ. |
| ಊ | ರೂ.103.5 ಕೋಟಿ ನಷ್ಟ ಉಂಟು ಮಾಡಿದ ಪ್ರೆಸ್ಟೀಜ್ ಗ್ರೂಪ್ ಕಂಪನಿಯ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; ಈ ಮೊತ್ತವನ್ನು ಇಲಾಖೆಯ ಅಧಿಕಾರಿಗಳ ವೇತನದಿಂದ ಕಟಾಯಿಸಲು ಸರ್ಕಾರದ ಕ್ರಮ ಕೈಗೊಳ್ಳುವುದೇ? | ಸರ್ಕಾರಕ್ಕೆ ಉಂಟಾಗಿರುವ ನಷ್ಟವನ್ನು ಸಂಬಂಧಪಟ್ಟ ಅಧಿಕಾರಿ/ ಪಕ್ಷಕಾರರಿಂದ ವಸೂಲಾತಿ ಮಾಡಲು ಕ್ರಮ ಕೈಗೊಳ್ಳಲಾಗುವುದು. |

ಸಂಖ್ಯೆ: ಕಂಇ 199 ಮುನೋಸ 2018

(ಆರ್.ವಿ.ದೇಶಪಾಂಡೆ)
ಕಂದಾಯ ಮತ್ತು ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು